1) ಸಾಕಷ್ಟು ನಿರ್ವಹಣಾ ಅನುದಾನದ ಲಭ್ಯತೆ ಇಲ್ಲದ ಕಾರಣ.

2) ನಿರ್ವಹಣೆಗೆ ಅನುದಾನದ ಲಭ್ಯತೆಗೆ ಅನುಸಾರವಾಗಿ ಸುಸ್ಥಿತಿಯನ್ನು ಕಾಯ್ದುಕೊಂಡು ಬರಲಾಗುವುದು.

3) ಇಲ್ಲ.

ಮೈಸೂರು ಜಿಲ್ಲೆ ಹಾಗೂ ತಾಲ್ಲೂಕಿನಲ್ಲಿ ಪಶು ಆಸ್ಪತ್ರೆಯ ವಿವರಗಳು.

1228(263) ಶ್ರೀ ಎ.ಎಸ್. ಗುರುಸ್ವಾಮಿ (ಚಾಮುಂಡೇಶ್ವರಿ) :— ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮೈಸೂರು ಜಿಲ್ಲೆ ಹಾಗೂ ತಾಲ್ಲೂಕಿನಲ್ಲಿ ಎಷ್ಟು ಪಶುವೈದ್ಯಕೀಯ ಆಸ್ಪತ್ರೆಗಳಿವೆ?

ಆ) ಜಾನುವಾರು ಸಂಖ್ಯೆಗೆ ಅನುಗುಣವಾಗಿ ಪಶು ವೈದ್ಯಕೀಯ ಆಸ್ಪತ್ರೆಗಳು ಇದೆಯೇ?

ಇ) ಜಾನುವಾರು ಅವಶ್ಯಕತೆಗೆ ಅನುಗುಣವಾಗಿ ಮಾರ್ಚ್ ಅಂದಾಜು ಪತ್ರದಲ್ಲಿ ಅನುದಾನ ನಿಗದಿಪಡಿಸಲಾಗುತ್ತಿದೆಯೇ?

ಈ) ಜಾನುವಾರು ಪ್ರಮಾಣಕ್ಕೆ ಮತ್ತು ಆಸ್ಪತ್ರೆಯ ಹಂಚಿಕೆ ಮತ್ತು ಅವರ ನಿರ್ವಹಣೆ ನಡುವಿನ ತಾರತಮ್ಯ ಹೋಗಲಾಡಿಸಲು ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :—

ಅ) ಮೈಸೂರು ಜಿಲ್ಲೆಯಲ್ಲಿ ಒಟ್ಟು 16 ಪಶು ಆಸ್ಪತ್ರೆಗಳು ಹಾಗೂ ಮೈಸೂರು ತಾಲ್ಲೂಕಿನಲ್ಲಿ ಒಟ್ಟು 6 ಪಶು ಆಸ್ಪತ್ರೆಗಳು ಇವೆ.

ಆ) ಇದೆ.

ಇ) ಇಲಾಖೆಯ ಆಥಿರ್ಕ ಸಂಪನ್ಮೂಲದಿಂದ ಅನುದಾನವನ್ನು ಗರಿಷ್ಠ ಪ್ರಮಾಣದಲ್ಲಿ ನೀಡಲಾಗುತ್ತಿದೆ.

ಈ) ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಹೆಚ್ಚಿನ ಅದ್ಯತೆ ನೀಡುವ ಮೂಲಕ ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಆಸ್ಪತ್ರೆಗಳ ಹಂಚಿಕೆ ಮತ್ತು ಅವರ ನಿರ್ವಹಣೆಯನ್ನು ಸಂಸ್ಥೆಗಳನ್ನು ಮೇಲ್ದರ್ಜೆಗೇರಿಸುವ ಮೂಲಕ ಮಾಡಲಾಗುತ್ತಿದೆ.